# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(3)ಪಿಆರ್/310/2022-23

ಮುಖ್ಯ ಆಯುಕ್ತರವರ ಕಛೇರಿ,
ಬೃಹತ್ ಮಹಾನಗರ ಪಾಲಿಕೆ ಕಛೇರಿಗಳು.
ಬೆಂಗಳೂರು, ದಿನಾಂಕ: 24.6.22

## ಕಛೇರಿ ಆದೇಶ

ವಿಷಯ: ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಾನೂನು ಕೋಶದ ಮುಖ್ಯಸ್ಥರ ಹುದ್ದೆಯನ್ನು ಭರ್ತಿ ಮಾಡುವ ಬಗ್ಗೆ.

ಉಲ್ಲೇಖ: 1) ಸರ್ಕಾರದ ಅಧಿಸೂಚನೆ ಸಂಖ್ಯೆ: ಯುಡಿಡಿ 90 ಎಂಎನ್‌ಯು 2014 (ಪಿ-1), ದಿನಾಂಕ: 16-03-2020.
2) ಅಧಿಕೃತ ಪತ್ರಿಕಾ ಪ್ರಕಟಣೆ ಸಂಖ್ಯೆ: ಬಿ12(3)ಪಿಆರ್/310/04-05, ದಿನಾಂಕ: 26-05-2022.
3) ದಿನಾಂಕ: 21-06-2022 ರಂದು ನಡೆದ ಆಯ್ಕೆ ಸಮಿತಿ ಸಭೆಯ ನಡವಳಿಗಳು.

* * * * *

**ಪ್ರಸ್ತಾವನೆ**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಾನೂನು ವಿಭಾಗದ ಮುಖ್ಯಸ್ಥರ ಹುದ್ದೆಯನ್ನು ಭರ್ತಿ ಮಾಡಲು ಸೇವಾ ವಿಷಯಗಳಲ್ಲಿ ಕಾರ್ಮಿಕರ ಕಾನೂನು, ಭೂ ಕಾನೂನು ಮತ್ತು ಕಂದಾಯ (ರೆವಿನ್ಯೂ) ವಿಷಯಗಳಲ್ಲಿ ಉತ್ತಮ ಪರಿಗಣಿತಿ ಹೊಂದಿರುವ ಮತ್ತು 65 ವರ್ಷಗಳ ವಯಸ್ಸಿನೊಳಗಿರುವ ನಿವೃತ್ತ ಜಿಲ್ಲಾ ಮತ್ತು ಸೆಷನ್ ನ್ಯಾಯಾಧೀಶರಿಂದ ಇಲ್ಲವೇ ವೃತ್ತಿ ನಿರತ ವಕೀಲರುಗಳಿಂದ ಜೊತೆಗೆ ಕರ್ನಾಟಕದಲ್ಲಿ ಕನಿಷ್ಠ 10 ವರ್ಷಗಳ ವಕೀಲತೆ ಮಾಡಿರುವವರಿಂದ ಅರ್ಜಿಗಳನ್ನು ಆಹ್ವಾನಿಸಿ, ಅರ್ಹರನ್ನು ಆಯ್ಕೆ ಮಾಡಲು ದಿನಾಂಕ: 26-05-2022 ರಂದು ಪತ್ರಿಕಾ ಪ್ರಕಟಣೆಗಳನ್ನು ಹೊರಡಿಸಲಾಗಿತ್ತು. ಈ ಸಂಬಂಧ, ನಿವೃತ್ತ ಜಿಲ್ಲಾ ನ್ಯಾಯಾಧೀಶರುಗಳಿಂದ ಹಾಗೂ ವೃತ್ತಿ ನಿರತರಾಗಿರುವ ವಕೀಲರುಗಳಿಂದ 14 ಅರ್ಜಿಗಳನ್ನು ಸ್ವೀಕರಿಸಲಾಗಿದ್ದು, ಈ ಪೈಕಿ ಸೂಕ್ತ ಅಭ್ಯರ್ಥಿಯನ್ನು ಆಯ್ಕೆ ಮಾಡಲು ಮುಖ್ಯ ಆಯುಕ್ತರವರ ಅಧ್ಯಕ್ಷತೆಯಲ್ಲಿ ರಚಿಸಿರುವ ಆಯ್ಕೆ ಸಮಿತಿಯು ದಿನಾಂಕ: 21-06-2022 ರಂದು ಸಂದರ್ಶನವನ್ನು ನಡೆಸಿ, ಕೈಗೊಳ್ಳಲಾಗಿರುವ ತೀರ್ಮಾನದಂತೆ, ಶ್ರೀ ಚಂದ್ರಶೇಖರ್ ಪಾಟೀಲ್, ನಿವೃತ್ತ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು, ಇವರನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಕಾನೂನು ವಿಭಾಗದ ಮುಖ್ಯಸ್ಥರನ್ನಾಗಿ ನೇಮಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

## -: ಆದೇಶ :-

ಪ್ರಸ್ತಾವನೆಯಲ್ಲಿನ ಎಲ್ಲಾ ಅಂಶಗಳ ಹಿನ್ನೆಲೆಯಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಕೆಲಸಕಾರ್ಯಗಳ ಹಿತದೃಷ್ಟಿಯಿಂದ ಶ್ರೀ ತುಷಾರ ಗಿರಿನಾಥ್, ಭಾ.ಆ.ಸೇ., ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಆದ ನಾನು ನನ್ನಲಿರುವ ಅಧಿಕಾರವನ್ನು ಚಲಾಯಿಸಿ, ಶ್ರೀ ಚಂದ್ರಶೇಖರ್ ಪಾಟೀಲ್, ನಿವೃತ್ತ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು, ಇವರನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಕಾನೂನು ವಿಭಾಗದ ಮುಖ್ಯಸ್ಥರನ್ನಾಗಿ ಈ ಕೆಳಕಂಡ ನಿಬಂಧನೆಗಳಿಗೊಳಪಟ್ಟು ದಿನಾಂಕ: 01-07-2022 ರಿಂದ ಒಂದು ವರ್ಷದ ಅವಧಿಗೆ ಅಥವಾ

ಮುಂದಿನ ಆದೇಶದವರೆಗೂ ಯಾವುದು ಮೊದಲೋ ಅಲ್ಲಿಯವರೆಗೆ ಕಾನೂನು ವಿಭಾಗದ ಮುಖ್ಯಸ್ಥರನ್ನಾಗಿ ನೇಮಕ ಮಾಡಿರುತ್ತೇನೆ.

1. 1958ರ ಕೆಸಿಎಸ್ಆರ್ ನಿಯಮಗಳನ್ವಯ ವೇತನ ನಿಗಧಿಪಡಿಸಲಾಗುವುದು
2. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಉದ್ಯೋಗಿಗಳಿಗಿರುವಂತೆ ರಜೆ ಮತ್ತು ವೈದ್ಯಕೀಯ ಸೌಲಭ್ಯಗಳನ್ನು ನೀಡಲಾಗುವುದು.

ಮುಖ್ಯ ಆಯುಕ್ತರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

23/06/2022

ಪ್ರತಿಯನ್ನು: ಮಾನ್ಯ ಆಡಳಿತಗಾರರ ಅವಗಾಹನೆಗೆ ತರಲು ಆಪ್ತ ಕಾರ್ಯಾಲಯಕ್ಕೆ ಕಳುಹಿಸಿದೆ.

: ಅಪರ ಮುಖ್ಯ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ಬೆಂಗಳೂರು ರವರಿಗೆ ಕಳುಹಿಸಿದೆ.

: ವಿಶೇಷ ಆಯುಕ್ತರು (ಆಡಳಿತ/ಯೋಜನೆ/ಹಣಕಾಸು) ರವರ ಅವಗಾಹನೆಗೆ ಕಳುಹಿಸಿದೆ.

: ಎಲ್ಲಾ ವಲಯಗಳ ಆಯುಕ್ತರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ.

: ಎಲ್ಲಾ ವಲಯ ಅಪರ ಆಯುಕ್ತರು/ಜಂಟಿ ಆಯುಕ್ತರುಗಳಿಗೆ ಕಳುಹಿಸಿದೆ.

: ಕಾನೂನು ಕೋಶದ ಮುಖ್ಯಸ್ಥರಿಗೆ ಕಳುಹಿಸಿದೆ.

: ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ ಕಳುಹಿಸಿದೆ.

: ಎಲ್ಲಾ ಬಟವಾಡೆ ಅಧಿಕಾರಿಗಳಿಗೆ ಕಳುಹಿಸಿದೆ.

: ಸಾರ್ವಜನಿಕ ಸಂಪರ್ಕಾಧಿಕಾರಿ ರವರಿಗೆ ಕಳುಹಿಸಿದೆ.

: ಮಾಹಿತಿ ಮತ್ತು ತಂತ್ರಜ್ಞಾನ ಸಲಹೆಗಾರರಿಗೆ ಕಳುಹಿಸುತ್ತಾ, ಪಾಲಿಕೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಕಳುಹಿಸಿದೆ.

: ಮುಲೆಅ/ಮುಲೆಪ/ಉ.ನಿ (ಹಣಕಾಸು–ಕೇಂದ್ರ) ರವರಿಗೆ ಕಳುಹಿಸಿದೆ.

: ಶ್ರೀ ಚಂದ್ರಶೇಖರ್ ಪಾಟೀಲ್, ನಿವೃತ್ತ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು, ನಂ. 411, ಶರಣ್ಯಾ 8ನೇ ಮುಖ್ಯರಸ್ತೆ, ಜುಡಿಷಿಯಲ್ ಲೇಔಟ್, 2ನೇ ಫೇಸ್, ತಲಘಟ್ಟಪುರ, ಕನಕಪುರ ಮುಖ್ಯರಸ್ತೆ, ಬೆಂಗಳೂರು–09 ರವರಿಗೆ ಕಳುಹಿಸಿದೆ.

: ಕಛೇರಿ ಪ್ರತಿ